154-72-132

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

******

**<u>ವಿಷಯ:</u> "ಅಂಗನವಾಡಿ ಕೇಂದ್ರಗಳಲ್ಲಿ ಕೆಲಸ ಮಾಡುವ ನೌಕರರಿಗೆ ಕರ್ತವ್ಯಕ್ಕೆ ಕನಿಷ್ಟ ವೇತನ ಸಿಗಬೇಕು. ಗುಜರಾತ್ ರಾಜ್ಯದಲ್ಲಿ ಅಂಗನವಾಡಿ ಕಾರ್ಯಕರ್ತೆಯರನ್ನು ಮತ್ತು ಸಹಾಯಕಿಯರನ್ನು ಸರ್ಕಾರಿ ನೌಕರರನ್ನಾಗಿ ಮಾಡಬೇಕೆಂದು ಹೈಕೋರ್ಟ್ ಆದೇಶ ನೀಡಿರುತ್ತಾರೆ. ಅದರಂತೆ ಕರ್ನಾಟಕ ರಾಜ್ಯದಲ್ಲೂ ಅಂಗನವಾಡಿ ಕಾರ್ಯಕರ್ತೆಯರನ್ನು ಮತ್ತು ಸಹಾಯಕಿಯರನ್ನು ಸರ್ಕಾರಿ ನೌಕರರಾಗಿ ಮಾಡಲು ಮತ್ತು 2011 ರ ಮಾರ್ಚ್ ತಿಂಗಳಿಂದ ನಿವೃತ್ತಗೊಂಡ ಅಂಗನವಾಡಿ ಕಾರ್ಯಕರ್ತೆಯರಿಗೂ ಮತ್ತು ಸಹಾಯಕಿಯರಿಗೂ ಗ್ರ್ಯಾಚ್ಯುಟಿ ವ್ಯವಸ್ಥೆ ಮಾಡಿಕೊಡಬೇಕೆಂದು ರಾಜ್ಯದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಕೇಳಿಕೊಳ್ಳುತ್ತಿರುವ ಬಗ್ಗೆ"**

**: ಉತ್ತರ:**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ಪ್ರಸ್ತುತ ರಾಜ್ಯದಲ್ಲಿ 67,590 ಮುಖ್ಯ ಅಂಗನವಾಡಿ ಹಾಗೂ 2,329 ಮಿನಿ ಅಂಗನವಾಡಿ ಕೇಂದ್ರಗಳನ್ನೊಳಗೊಂಡಂತೆ ಒಟ್ಟು 69,919 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಅಂಗನವಾಡಿ ಕೇಂದ್ರಗಳಲ್ಲಿ ಪ್ರಸ್ತುತ 66,315 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 58,443 ಅಂಗನವಾಡಿ ಸಹಾಯಕಿಯರು ಕಾರ್ಯನಿರ್ವಹಿಸುತ್ತಿದ್ದಾರೆ.

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ದೇಶದಾದ್ಯಂತ ಏಕರೂಪ ಮಾರ್ಗಸೂಚಿಗಳು ಚಾಲ್ತಿಯಲ್ಲಿರುತ್ತವೆ. ಆದ್ದರಿಂದ, ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರನ್ನು ಗೌರವಧನದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಗೌರವಧನವನ್ನು ಕೇಂದ್ರ ಸರ್ಕಾರದ ಅನುಮೋದನೆಯ ನಂತರ ಕನಿಷ್ಟ ವೇತನ ಹಾಗು ಸರ್ಕಾರಿ ನೌಕರರನ್ನಾಗಿಸುವ ಕುರಿತು ಕ್ರಮ ವಹಿಸಲಾಗುವುದು.

2023-24ನೇ ಸಾಲಿನಿಂದ ನಿವೃತ್ತಿಯಾಗಿರುವ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ ಗ್ರ್ಯಾಚ್ಯುಟಿ ನೀಡಲು ಈಗಾಗಲೇ ಕ್ರಮ ವಹಿಸಲಾಗುತ್ತಿದೆ. ಉಳಿದಂತೆ 2011 ರಿಂದ ನಿವೃತ್ತರಾಗಿರುವ ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರಿಗೆ ಗ್ರ್ಯಾಚುಟಿ ಪಾವತಿಸಲು ಇಲಾಖಾ ಹಂತದಲ್ಲಿ ಪ್ರಸ್ತಾವನೆ ಸಿದ್ಧಪಡಿಸಲಾಗುತ್ತಿದೆ.

**ಸಂಖ್ಯೆ**: ಮಮಇ 353 ಐಸಿಡಿ 2024

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು